## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಮನಗರ-ಚನ್ನಪಟ್ಟಣ ಸ್ಥಳೀಯ ಯೋಜನಾ ಪ್ರದೇಶದ ಮಧ್ಯಂತರ ಮಹಾಯೋಜನೆ (IMP)ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ:ನಅಇ 02 ಬಿಎಂಆರ್ 2007, ದಿನಾಂಕ:05-09-2009
2) ಸರ್ಕಾರದ ಆದೇಶ ಸಂಖ್ಯೆ:ನಅಇ 02 ಬಿಎಂಆರ್ 2007, ದಿನಾಂಕ:19-01-2011.
3) ಪತ್ರ ಸಂಖ್ಯೆ:ಬಿಎಂಆರ್‌ಡಿಎ/ಎಂಪಿಎಸ್/ಎಪಿಜಡ್-1/2006-07/ಭಾಗ-2, ದಿನಾಂಕ:12-04-2013.
4) ಪತ್ರ ಸಂಖ್ಯೆ:ಬಿಎಂಆರ್‌ಡಿಎ/ಎಂಪಿಎಸ್/ಎಪಿಜಡ್-1/2006-07/ಭಾಗ-2, ದಿನಾಂಕ:06-09-2013.

ಪ್ರಸ್ತಾವನೆ:

ಮೇಲೆ (1) ಮತ್ತು (2)ರಲ್ಲಿ ಓದಲಾದ ಆದೇಶಗಳಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ರಾಮನಗರ-ಚನ್ನಪಟ್ಟಣ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಲಾಗಿದ್ದ ಕರಡು ಮಧ್ಯಂತರ ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13(ಎ)ರಲ್ಲಿ ಕೆಲವು ನಿಬಂಧನೆಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಲಾಗಿತ್ತು.

ಆ ಹಿನ್ನಲೆಯಲ್ಲಿ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು. ಈ ಕುರಿತಂತೆ ಸ್ವೀಕರಿಸಿರುವ ಸಲಹೆ/ಆಕ್ಷೇಪಣೆಗಳನ್ನು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರವು ರಚಿಸಿದ ಸಮಿತಿಯು ಪರಿಶೀಲಿಸಿರುತ್ತದೆ. ಅದಲ್ಲದೆ ನಂತರ ಸರ್ಕಾರಿ ಪತ್ರ ಸಂಖ್ಯೆ:ನಅಇ 02 ಬಿಎಂಆರ್ 2007, ದಿನಾಂಕ:21-10-2010 ಹಾಗೂ ದಿನಾಂಕ:30-06-2011 ಇವುಗಳಲ್ಲಿ ನೀಡಲಾದ ಸೂಚನೆಗಳ ಮೇರೆಗೆ ಮಧ್ಯಂತರ ಕರಡು ಮಹಾಯೋಜನೆಯಲ್ಲಿ ಕೆಲವು ಮಾರ್ಪಾಡುಗಳನ್ನು ಅಳವಡಿಸಿಕೊಂಡು ಮೇಲೆ (3) ಮತ್ತು (4) ರಲ್ಲಿ ಓದಲಾದ ಪತ್ರಗಳಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಮಧ್ಯಂತರ ಮಹಾಯೋಜನೆಗೆ ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 02 ಬಿಎಂಆರ್ 2007 ಬೆಂಗಳೂರು, ದಿನಾಂಕ:24-10-2013**

ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ರಾಮನಗರ-ಚನ್ನಪಟ್ಟಣ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸಂಬಂಧಿಸಿದಂತೆ ಸಲ್ಲಿಸಿರುವ ಮಧ್ಯಂತರ ಮಹಾಯೋಜನೆ (IMP)ಗೆ ಈ ಕೆಳಕಂಡ ನಿಬಂಧನೆಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13(ಎ)ರನ್ವಯ ಅನುಮೋದನೆ ನೀಡಲಾಗಿದೆ.

1) ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಲು ಉದ್ದೇಶಿಸಿರುವ STRR/IRR/ITRR ರಸ್ತೆಗಳ ಪಂಕ್ತೀಕರಣವನ್ನು ಅಭಿವೃದ್ಧಿಗೆ ಅನುಮೋದಿಸುವ ಮೊದಲು ಪರಿಗಣಿಸುವುದು.

2) ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13ಎ(2)ರನ್ವಯ ಪೂರ್ಣ ಪ್ರಮಾಣದ ಮಹಾಯೋಜನೆಯನ್ನು ಕಾಲಮಿತಿಯೊಳಗೆ ತಯಾರಿಸಿ, ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ರಾಮನಗರ-ಚನ್ನಪಟ್ಟಣ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಧ್ಯಂತರ ಮಹಾಯೋಜನೆಯ ನಕ್ಷೆ ಮತ್ತು ವರದಿಗೆ ಸರ್ಕಾರದ ಮೊಹರಿನೊಂದಿಗೆ ಸಹಿ ಮಾಡಿ ದೃಢೀಕರಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು-(ಈ ಆದೇಶವನ್ನು ದಿನಾಂಕ:25-10-2013 ರಂದು ಪ್ರಕಟಿಸುವ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 500 ಪ್ರತಿ ಒದಗಿಸುವಂತೆ ಕೋರುತ್ತಾ)

ಪ್ರತಿ ಇವರಿಗೆ:-

1) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.

3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ಮೂಲಸೌಲಭ್ಯ ಅಭಿವೃದ್ಧಿ ಹಣಕಾಸು ನಿಗಮ.
8) ನಗರ ಯೋಜನಾ ನಿರ್ದೇಶಕರು, ನಗರ ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9) ಆಯುಕ್ತರು, ರಾಮನಗರ-ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರ, ರಾಮನಗರ.
10) ಜಿಲ್ಲಾಧಿಕಾರಿಗಳು, ರಾಮನಗರ.
11) ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ಜಿಲ್ಲೆ.
12) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಇವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ.
13) ಶಾಖಾ ರಕ್ಷಾ ಕಡತ.
14) ಹೆಚ್ಚುವರಿ ಪ್ರತಿಗಳು.